# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 413
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.08.2025
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನ ಮಚ್ಚಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ (ನಿ) ಈ ಸಂಘಕ್ಕೆ ಮಚ್ಚಿನ ಗ್ರಾಮದ ಬಳ್ಳಮಂಜ ಎಂಬಲ್ಲಿ 363/1 ರಲ್ಲಿ 0.35 ಭೂಮಿ ಪರಿವರ್ತನೆ ಆಗಿದ್ದು, ಉಳಿದ ಅಂದಾಜು 0.50 ಎಕರೆ ಭೂಮಿ ಸುಮಾರು 50 ವರ್ಷಗಳಿಂದ ಸಂಘದ ಸ್ವಾಧೀನದಲ್ಲಿಯೇ ಇದ್ದು, ಅದನ್ನು ಸಂಘದ ಅಭಿವೃದ್ಧಿ ಹಾಗೂ ಬೆಳವಣಿಗೆಗೆ ಅತ್ಯವಶ್ಯವಾಗಿರುವುದರಿಂದ ಮಂಜೂರು ಮಾಡುವಂತೆ ಬೇಡಿಕೆ ಇದ್ದು, ಸದರಿ ಪ್ರಸ್ತಾವನೆ ಸರ್ಕಾರದ ಮುಂದೆ ಪ್ರಸ್ತುತ ಯಾವ ಹಂತದಲ್ಲಿದೆ; | ಮಚ್ಚಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಇವರಿಗೆ ಬೆಳ್ತಂಗಡಿ ತಾಲೂಕು ಮಚ್ಚಿನ ಗ್ರಾಮದ ಸ.ನಂ.363/1 ರಲ್ಲಿ ಜಮೀನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಸರ್ಕಾರದ ಪತ್ರ ಸಂಖ್ಯೆ ಕಂಇ 1 ಎಲ್‌ಜಿಎ 2024 ದಿನಾಂಕ 04/02/2025 ರಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ. ಅದರನ್ವಯ ಪ್ರಸ್ತಾವನೆಯು ಜಿಲ್ಲಾಡಳಿತದ ಹಂತದಲ್ಲಿ ಪರಿಶೀಲನಾ ಹಂತದಲ್ಲಿದೆ. |
| (ಆ) | ಸಂಘದ ಅಭಿವೃದ್ಧಿ ಹಾಗೂ ಬೆಳವಣಿಗೆ ಪೂರಕವಾಗಿ ಗೋದಾಮು ಕಟ್ಟಡ ನಿರ್ಮಾಣ ಹಾಗೂ ಪಡಿತರ ರಾಸಾಯನಿಕ ಗೊಬ್ಬರ ಮತ್ತು ಕ್ರಿಮಿನಾಶಕ ವಿತರಣೆಗೆ ಅನುಕೂಲವಾಗಲಿದ್ದು, ಸಾರ್ವಜನಿಕ ಹಾಗೂ ರೈತರ ಹಿತದೃಷ್ಟಿಯಿಂದ ಸದರಿ ಜಮೀನನ್ನು ಮಚ್ಚಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ (ನಿ)ಕ್ಕೆ ಮಂಜೂರು ಮಾಡಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ; | ಪ್ರಸ್ತುತ ಸರ್ಕಾರಕ್ಕೆ ಪ್ರಸ್ತಾವನೆಯು ಸ್ವೀಕೃತಗೊಂಡಿರುವುದಿಲ್ಲ. ಸ್ವೀಕೃತಗೊಂಡ ನಂತರ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರನ್ವಯ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಜಮೀನನ್ನು ಮಚ್ಚಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ (ನಿ)ಕ್ಕೆ ಮಂಜೂರು ಮಾಡಲಾಗುವುದು? | |

(ಕಡತ ಸಂಖ್ಯೆ: ಆರ್‌ಡಿ 83 ಎಲ್‌ಜಿಎ 2025)

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು